RNU AIR DHARWAD

JULY 06, 2026

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದಲ್ಲಿ ಜೂನ್ ತಿಂಗಳಲ್ಲಿ ನಿರೀಕ್ಷಿತ** ಮುಂಗಾರು ಮಳೆಯಾಗದ ಹಿನ್ನೆಲೆ, ಮುಂಗಾರು ಬಿತ್ತನೆ ಕುಂಠಿತಗೊಂಡಿದೆ. ನಾಡಿನಾದ್ಯಂತ ಸೂಪರ್ ಎಲ್ ನಿನೊ ಪ್ರಭಾವದಿಂದ ಬರದ ಛಾಯೆ ಆವರಿಸಿದೆ. ವಿಭಾಗವಾರು ಬರ ಪರಿಸ್ಥಿತಿ ಅವಲೋಕಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಕಲಬುರಗಿಗೆ ಆಗಮಿಸಿ, ನಾಳೆ ವಿಶೇಷ ಸಭೆ ಆಯೋಜಿಸಲಿದ್ದಾರೆ ಎಂದು ಗೃಹ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರಗಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಾತನಾಡಿದ ಸಚಿವ ಪ್ರಿಯಾಂಕ ಖರ್ಗೆ, ಸೂಪರ್ ಎಲ್ ನಿನೊ ಹಿನ್ನೆಲೆ, ರಾಜ್ಯದಲ್ಲಿ ಶೇಕಡ 35 ರಷ್ಟು ಮಳೆ ಕೊರತೆಯಾಗಿದೆ. ಮುಂದಿನ ದಿನಗಳಲ್ಲಿ ಈ ಸವಾಲನ್ನು ಸಮರ್ಥವಾಗಿ ಎದುರಿಸಲು, ಕಲ್ಯಾಣ ಕರ್ನಾಟಕದ ಕಲಬುರಗಿಯಿಂದ, ವಿಭಾಗವಾರು ಬರ ಸಮಸ್ಯೆ ಕುರಿತು ಮುಖ್ಯಮಂತ್ರಿಯವರು ಸಭೆ ನಡೆಸಲಿದ್ದಾರೆ ಎಂದರು.

<><><>

**ಭದ್ರಾ ಜಲಾಶಯದಲ್ಲಿ ನೀರಿನ ಲಭ್ಯತೆಗೆ ಅನುಗುಣವಾಗಿ,** ಆಗಸ್ಟ್ ಅಂತ್ಯದ ವೇಳೆಗೆ ಭದ್ರಾ ಮೇಲ್ದಂಡೆ ಯೋಜನೆಯಡಿ, ಚಿತ್ರದುರ್ಗ ಶಾಖಾ ಕಾಲುವೆಗೆ ಪ್ರಾಯೋಗಿಕವಾಗಿ ನೀರು ಹರಿಸಲಾಗುವುದು ಎಂದು ಜಲ ಸಂಪನ್ಮೂಲ ಖಾತೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಚಿತ್ರದುರ್ಗ ಶಾಖಾ ಕಾಲುವೆಯ, ಗೋನೂರು ಅಕ್ವಾ ಡಕ್ಟ್ ಕಾಮಗಾರಿ ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು. ಭದ್ರಾ ಮೇಲ್ದಂಡೆ ಯೋಜನೆಯ ಎಲ್ಲ ಕಾಮಗಾರಿಗಳನ್ನು 2028 ರೊಳಗೆ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

<><><>

**ಕೊಡಗು ಜಿಲ್ಲೆ ಸೇರಿದಂತೆ, ಕಾವೇರಿ ಜಲಾನಯನ** ಪ್ರದೇಶದಲ್ಲಿ ಮಳೆಯಾಗುತ್ತಿರುವ ಹಿನ್ನೆಲೆ, ಮಂಡ್ಯ ಜಿಲ್ಲೆ ಕೃಷ್ಣ ರಾಜ ಸಾಗರ– ಕೆ.ಆರ್.ಎಸ್ ಜಲಾಶಯದ ನೀರಿನ ಒಳಹರಿವಿನಲ್ಲಿ ಅಲ್ಪ ಚೇತರಿಕೆ ಕಂಡಿದೆ. ಮೂರು ದಿನಗಳ ಹಿಂದೆ, 900 ಕ್ಯೂಸೆಕ್ ಇದ್ದ ನೀರಿನ ಒಳ ಹರಿವು, ನಿನ್ನೆಯಿಂದ ಸಾವಿರದ 95 ಕ್ಯೂಸೆಕ್ ಗೆ ಏರಿಕೆಯಾಗಿದೆ.

<><><>

**ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆಯಂತೆ,** ಉತ್ತರ ಕನ್ನಡ ಜಿಲ್ಲೆಯಲ್ಲಿ 9 ನೇ ತಾರೀಖು ಬೆಳಗ್ಗೆ 8. 30ರ ವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. 40 ರಿಂದ 50 ಕಿಲೋಮೀಟರ್ ವೇಗದಲ್ಲಿ ಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಸೂಚಿಸಿದ್ದಾರೆ.

<><><>

**ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆಯಲ್ಲಿ** ಸುರಿಯುತ್ತಿರುವ ನಿರಂತರ ಮಳೆ ಹಿನ್ನೆಲೆ, ಮೂಡಿಗೆರೆ ತಾಲೂಕಿನ ಎಲ್ಲ ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಇಂದು ರಜೆ ಘೋಷಿಸಲಾಗಿದೆ.

<><><>

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಂಗಾರು** ಮಳೆಯಿಂದಾಗಿ ಸಂಭವಿಸಿರುವ ಕೃಷಿ ಹಾನಿಯ ಕುರಿತಂತೆ, ಆದ ಷ್ಟ ಶೀಘ್ರ ಸಮೀಕ್ಷೆ ನಡೆಸಿ ವರದಿ ಸಲ್ಲಿಸುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ಯು.ಟಿ.ಖಾದರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

**ಶಿವಮೊಗ್ಗ ಜಿಲ್ಲೆ, ಸೊರಬ ತಾಲೂಕು ವ್ಯಾಪ್ತಿಯಲ್ಲಿ** ಸಾವಿರದ 300 ಕೆರೆಗಳಿವೆ. ಇವುಗಳಲ್ಲಿ ಸುಮಾರು 500 ಕೆರೆಗಳು ಒತ್ತುವರಿ ಆಗಿದ್ದು, ಕೆರೆಗಳ ಸಂರಕ್ಷಣೆಗೆ ಸಂಬಂಧಪಟ್ಟ ಇಲಾಖೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕಂತನಳ್ಳಿ ಪ್ರದೇಶದ 300 ಎಕರೆ ದಟ್ಟ ಅರಣ್ಯ ಭೂಮಿ ನಾಶ ತಡೆಯಲು, ಅರಣ್ಯ ಇಲಾಖೆ ವಿಶೇಷ ಯೋಜನೆ ಜಾರಿಗೊಳಿಸಿ, ದೇವರಕಾಡು ಎಂದು ಘೋಷಿಸುವಂತೆ ವೃಕ್ಷಲಕ್ಷ ಆಂದೋಲನ ಕರ್ನಾಟಕ, ಅಧ್ಯಕ್ಷ ಅನಂತ ಹೆಗಡೆ ಅಶೀಸರ ತಾಲೂಕು ಅರಣ್ಯ ಇಲಾಖೆ ಅಧಿಕಾರಿ ಹಾಗೂ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಉತ್ತರ ಕನ್ನಡ ಜಿಲ್ಲೆ, ಯಲ್ಲಾಪುರದ ವೃಕ್ಷಲಕ್ಷ ಆಂದೋಲನದ ಸಂಚಾಲಕ ಶ್ರೀಪಾದ ಬಿಚ್ಚುಗತ್ತಿ

<><><>

**ಶ್ರೀಪಾದ ಬಿಚ್ಚುಗತ್ತಿ ಧ್ವನಿ– 32 ಸೆಕೆಂದುಗಳು**

<><><>

**ಇಂದು ದೇಶದ ಹಸಿರು ಕ್ರಾಂತಿಯ ಹರಿಕಾರ, ಮಾಜಿ** ಉಪ ಪ್ರಧಾನಮಂತ್ರಿ, ಡಾಕ್ಟರ ಬಾಬು ಜಗಜೀವನ ರಾಮ ಅವರ 40 ನೇ ಪುಣ್ಯತಿಥಿ. ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಬಾಬು ಜಗಜೀವನ್ ರಾಮ್ ಅವರ ಸಾಮಾಜಿಕ ಕೊಡುಗೆಗಳನ್ನು ಸ್ಮರಿಸಿದ್ದು, ಗೌರವ ನಮನ ಸಲ್ಲಿಸಿದ್ದಾರೆ. ಇಂದು ಬೆಳಗ್ಗೆ ವಿಧಾನಸೌಧದ ಪಶ್ಚಿಮ ದ್ವಾರದ ಬಳಿಯಿರುವ, ಡಾಕ್ಟರ ಬಾಬು ಜಗಜೀವನ ರಾಂ ಅವರ ಪ್ರತಿಮೆಗೆ ಗಣ್ಯರು ಮಾಲಾರ್ಪಣೆ ಮಾಡಿ, ಗೌರವ ಸಮರ್ಪಿಸಿದರು.

<><><>

**ಮಂಡ್ಯ ಜಿಲ್ಲಾಧಿಕಾರಿ ಕಚೇರಿ** ಮುಂಭಾಗದಲ್ಲಿರುವ, ಡಾಕ್ಟರ ಬಾಬು ಜಗಜೀವನ್ ರಾಮ್ ಪ್ರತಿಮೆಗೆ, ಜಿಲ್ಲಾಧಿಕಾರಿ ಡಾಕ್ಟರ ಕುಮಾರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್ ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿ.ಜೆ ಶೋಭಾರಾಣಿ ಸೇರಿದಂತೆ ಗಣ್ಯರು ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಸಿದರು.

<><><>

**ಇಂದು ಟಿಬೆಟಿಯನ್ ಬೌದ್ಧ** ಧರ್ಮ ಗುರು, 14 ನೇ ದಲೈ ಲಾಮಾ ಅವರ ಜನ್ಮದಿನ. ನೊಬೆಲ್ ಶಾಂತಿ ಪ್ರಶಸ್ತಿ ಪುರಸ್ಕೃತ, ದಲೈ ಲಾಮಾ ಅವರಿಗೆ, ಗಣ್ಯರು 91 ನೇ, ಜನ್ಮ ದಿನದ ಹಾರ್ದಿಕ ಶುಭಾಶಯಗಳನ್ನು ತಿಳಿಸಿದ್ದಾರೆ.

<><><>

**ದೇಶದ ಏಕತೆ ಹಾಗೂ ರಾಷ್ಟ್ರೀಯ** ಅಖಂಡತೆಯ ಹರಿಕಾರ, ಭಾರತೀಯ ಜನಸಂಘದ ಸಂಸ್ಥಾಪಕ ಡಾಕ್ಟರ ಶಾಮ ಪ್ರಸಾದ್ ಮುಖರ್ಜಿ ಅವರ ಜಯಂತಿ ದಿನವಾದ ಇಂದು, ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಗಣ್ಯರು ಶಾಮ ಪ್ರಸಾದ ಮುಖರ್ಜಿ ಅವರ ಕೊಡುಗೆ ಗಳನ್ನು ಸ್ಮರಿಸಿ, ಶದ್ಧಾ ಸುಮನ ಅರ್ಪಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>